**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ದೇವದುರ್ಗ.**

**CC No.174/2019**

**CW -1 PW-2**

| | | |
|---|---|---|
| ಸಾಕ್ಷಿದಾರನ ಹೆಸರು | ಃ | ನೀಲಮ್ಮ |
| ಗಂಡ | ಃ | ಹನುಮಂತರಾಯ |
| ವಯಸ್ಸು | ಃ | 25 |
| ಉದ್ಯೋಗ | ಃ | ಕೂಲಿ |
| ವಾಸಸ್ಥಳ | ಃ | ದೇವರಗುಂಡ |
| ಪ್ರಮಾಣಿಕರಿಸಿದ ದಿನಾಂಕ | ಃ | **17-04-2026** |

---

**ಮುಖ್ಯ ವಿಚಾರಣೆ:- ಮಾನ್ಯ ಸ.ಸ.ಅ ರವರಿಂದ**

ಪ್ರಕರಣದ ಬಗ್ಗೆ ನನಗೆ ಗೊತ್ತಿಲ್ಲ. ಅಪಘಾತ ಹೇಗೆ ಮತ್ತು ಯಾರ ತಪ್ಪಿನಿಂದ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ಮೃತಪಟ್ಟ ಹನುಮಂತರಾಯ ನನ್ನ ಗಂಡ. ನಾನು ಪೋಲಿಸರಿಗೆ ದೂರನ್ನು ನೀಡಿಲ್ಲ. ನಾನು ಹೆಬ್ಬಟ್ಟಿನ ಗುರುತನ್ನು ಹಾಕಿರುತ್ತೇನೆ. ದೂರನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

**(**ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.**)**

**ಪಾಟೀ ಸವಾಲು:- ಮಾನ್ಯ ಸ.ಸ.ಅ ರವರಿಂದ**

ದಿನಾಂಕ 26-02-2019 ರಂದು ಮಧ್ಯಾಹ್ನ 12.00 ಗಂಟೆಗೆ ಗಲಗ-ಮುಂಡರಿಗಿ ಮುಖ್ಯ ರಸ್ತೆಯ ಮೇಲೆ ನನ್ನ ಗಂಡ ಮೃತ ಹನುಮಂತರಾಯ ನನ್ನನ್ನು ಮತ್ತು ಚಾಸಾ-6 ರಿಂದ 14 ರವರನ್ನು ಟ್ರಾಕ್ಟರನಲ್ಲಿ ಕೂಡಿಸಿಕೊಂಡು ಅತಿವೇಗ ಅಲಕ್ಷತನದಿಂದ ಚಾಲನೆ ಮಾಡಿ ಹೇಳಿಕೆ ಕಟ್ಟೆ ಹತ್ತಿರ ಸಡನ್ ಬ್ರೆಕ್ ಹಾಕಿದ್ದರಿಂದ ಟ್ರಾಲಿಯ ಹಿಂದಿನ ಪಾಟಕ ಬಿಚ್ಚಿದ್ದರಿಂದ ಪಾಟಕ ಹತ್ತಿರ ಕುಳಿತ ಮೃತ ಹನುಮಂತರಾಯ ರೋಡಿನ ಮೇಲೆ ಬಿದ್ದಿದ್ದರಿಂದ ತಲೆಯ ಹಿಂಭಾಗಕ್ಕೆ ಭಾರಿ ಸ್ವರೂಪದ ಒಳಪೆಟ್ಟು ಆಗಿ ಚಿಕಿತ್ಸೆ ಫಲಕಾರಿಯಾಗದೇ ಕಲಬುರ್ಗಿ ವಾತ್ಸಲ್ಯ ಆಸ್ಪತ್ರೆಯಿಂದ ಕಲಬುರ್ಗಿ ಸರಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗುವಾಗ ದಿನಾಂಕ 20.07.2019 ರಂದು ಸಂಜೆ 7 ಗಂಟೆಗೆ ಮೃತಪಟ್ಟಿರುತ್ತಾನೆ ಎಂದು ಮತ್ತು ಸದರಿ ವಾಹನವನ್ನು ಆರೋಪಿ ಅಪಘಾತವಾದ ನಂತರ ಸ್ಥಳದಿಂದ ಟ್ರಾಕ್ಟರನ್ನು ತೆಗೆದುಕೊಂಡು ಹೋಗಿದ್ದು ಅ ಕುರಿತು ಪೋಲಿಸರಿಗೆ ನಿಪಿ-2 ರಂತೆ ದೂರು ಮತ್ತು ನಿಪಿ-3 ರಂತೆ ಪುರವಣಿ ಹೇಳಿಕೆ ನೀಡಿರತ್ತೇನೆ ಎಂದರೆ

ಸರಿಯಲ್ಲ.  ಆರೋಪಿ ಜೊತೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು:-** ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಮರುವಿಚಾರಣೆ:-** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೇ.ಸರಿ.ಇದೆ.

ಹಿರಿಯ ಸಿವಿಲ್ ಮತ್ತು ಜೆ.ಎಂ.ಎಫ್.ಸಿ, ದೇವದುರ್ಗ.